ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 11/11/20

ಮುಂದಿನ ಶೈಕ್ಷಣಿಕ ವರ್ಷದಿಂದ ದೇಶಾದ್ಯಂತ ಜಾರಿ

ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ ಹೊಸ ನಿಯಮ

ವಿ.ಕ 11/11/20

ಹೊಸದಿಲ್ಲಿ: ವೈದ್ಯಕೀಯ ಶಿಕ್ಷಣದಲ್ಲಿ ಮಹತ್ವದ ಸುಧಾರಣೆ ಕ್ರಮಗಳನ್ನು ಕೈಗೊಂಡಿರುವ ರಾಷ್ಟ್ರೀಯ ವೈದ್ಯಕೀಯ ಆಯೋಗ (ಎನ್‌ಎಂಸಿ), ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ಸಂಬಂಧಿಸಿ ಶನಿವಾರ ಪರಿಷ್ಕೃತ ನಿಯಮಾವಳಿಗಳನ್ನು ಪ್ರಕಟಿಸಿದೆ.

'ಎಂಬಿಬಿಎಸ್ ಪ್ರವೇಶಕ್ಕೆ ಕನಿಷ್ಠ ವಾರ್ಷಿಕ ಅಗತ್ಯತೆಗಳ ನಿಯಮಗಳು 2020' ಹೆಸರಿನಲ್ಲಿ ಅಧಿಸೂಚನೆ ಹೊರಡಿಸಿದೆ. ಈ ಹಿಂದಿನ ಭಾರತೀಯ ವೈದ್ಯಕೀಯ ಮಂಡಳಿ (ಎಂಸಿಐ) ಹೊರಡಿಸಿದ್ದ 'ವೈದ್ಯಕೀಯ ಕಾಲೇಜುಗಳ ಕನಿಷ್ಠ ಮಾನದಂಡ ನಿಯಮಾವಳಿ 1999' ಬದಲಾಗಿ ಹೊಸ ನಿಯಮಗಳು ಜಾರಿಗೆ ಬರಲಿವೆ. ''ಹೊಸ ನಿಯಮಾವಳಿಗಳು ವೈದ್ಯಕೀಯ ಕಾಲೇಜುಗಳು 2021-22ನೇ ಶೈಕ್ಷಣಿಕ ವರ್ಷದ ಪ್ರವೇಶ ಪ್ರಕ್ರಿಯೆ ಮತ್ತು ಮುಂದೆ ಸ್ಥಾಪನೆಯಾಗಲಿರುವ ಎಲ್ಲ ವೈದ್ಯಕೀಯ ಕಾಲೇಜುಗಳಿಗೂ ಅನ್ವಯವಾಗಲಿವೆ. ಹೊಸ ನಿಯಮಾವಳಿಗಳನ್ನು ಸಂಸ್ಥೆಗಳ ಕಾರ್ಯನಿರ್ವಹಣಾ ಅಗತ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗಿದೆ. ಅದರಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಗರಿಷ್ಠ ಪ್ರಮಾಣದಲ್ಲಿ ಮತ್ತು ಸರಳವಾಗಿ ಬಳಸಿಕೊಳ್ಳುವುದು, ಆಧುನಿಕ ಶೈಕ್ಷಣಿಕ ಸಂಪನ್ಮೂಲ ಸಾಮಗ್ರಿಗಳನ್ನು ಬಳಸಿಕೊಂಡು, ಒಂದೊಮ್ಮೆ ಸಂಪನ್ಮೂಲ ಕೊರತೆಯಿರುವ ಸಂದರ್ಭಗಳಲ್ಲೂ ಗುಣಮಟ್ಟದ ಶಿಕ್ಷಣ ನೀಡುವ ಕ್ರಮಗಳ ಕುರಿತು ಒತ್ತು ನೀಡಲಾಗಿದೆ,'' ಎಂದು ಆಯೋಗವು ತಿಳಿಸಿದೆ.

ಪ್ರಮುಖ ಬದಲಾವಣೆಗಳೇನು?:
ಹೊಸ ನಿಯಮಾವಳಿಯಲ್ಲಿ ವೈದ್ಯಕೀಯ ಕಾಲೇಜುಗಳು ಹಾಗೂ ಮಾನ್ಯತೆ ಪಡೆದಿರುವ ತರಬೇತಿ ಆಸ್ಪತ್ರೆಗಳ ಸ್ಥಾಪನೆಗೆ ನಿಗದಿಪಡಿಸಲಾಗಿದ್ದ ಭೂಮಿಯ ಅಗತ್ಯ ಪ್ರಮಾಣವನ್ನು ತೆಗೆದು ಹಾಕಲಾಗಿದೆ. ಜತೆಗೆ, ವೈದ್ಯಕೀಯ ಶಿಕ್ಷಣ ಸಂಸ್ಥೆಯೊಂದು ಎಲ್ಲ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತಹ ರೀತಿಯಲ್ಲಿ ಹೊಂದಿರಬೇಕಾದ ಅಗತ್ಯ ಪ್ರದೇಶಗಳನ್ನು ಗುರುತಿಸಿದೆ. ಗ್ರಂಥಾಲಯಕ್ಕೆ ಬೇಕಾದ ಸ್ಥಳಾವಕಾಶ ಮತ್ತು ಪುಸ್ತಕಗಳು ಹಾಗೂ ಜರ್ನಲ್ ಗಳ ಸಂಖ್ಯೆಯನ್ನು ಗಣನೀಯವಾಗಿ ಇಳಿಕೆ ಮಾಡಲಾಗಿದೆ. ಲಭ್ಯವಿರುವ ಎಲ್ಲಾ ಬೋಧನಾ ಸ್ಥಳಗಳು ಇ-ಕಲಿಕೆ ಮತ್ತು ಡಿಜಿಟಲ್‌ಗೆ ಸಂಯೋಜನೆಗೊಂಡಿರಬೇಕು ಎಂದು ಸೂಚಿಸಲಾಗಿದೆ. ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಸುಸಜ್ಜಿತ 'ಕೌಶಲ್ಯ ಪ್ರಯೋಗಾಲಯ' ಮತ್ತು ಬೋಧಕರಿಗೆ ತರಬೇತಿ ನೀಡಲು ವೈದ್ಯಕೀಯ ಶಿಕ್ಷಣ ಘಟಕ ಸ್ಥಾಪನೆಯನ್ನು ಪ್ರಸ್ತಾಪಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ಸ್ಥಾನಿಕ ವೈದ್ಯರ ಮೇಲೆ ಒತ್ತಡ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿ ಆಪ್ತ ಸಮಾಲೋಚನಾ ಸೇವೆಗಳನ್ನು ಕಡ್ಡಾಯಗೊಳಿಸಲಾಗಿದೆ. ಅತಿಥಿ ಬೋಧಕರ ಸೇವೆ ಬಳಸಿಕೊಳ್ಳಲು ಅವಕಾಶ ನೀಡಲಾಗಿದೆ.

ಹೊಸ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿರುವ 300 ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯು ಎರಡು ವರ್ಷಗಳ ಅವಧಿಗೆ ಲಭ್ಯವಿರುವಂತೆ ನೋಡಿಕೊಳ್ಳಬೇಕು ಎಂದು ಹೊಸ ನಿಯಮಾವಳಿಯಲ್ಲಿ ಸ್ಪಷ್ಟಪಡಿಸಲಾಗಿದೆ. ಈ ಮೊದಲಿನ ನಿಯಮಾವಳಿಯಲ್ಲಿ ಆಸ್ಪತ್ರೆ ಕಾರ್ಯನಿರ್ವಹಣೆ ಅವಧಿಯನ್ನು ನಿಗದಿಪಡಿಸಿರಲಿಲ್ಲ. ಬೋಧನಾ ಹಾಸಿಗೆ ಅಗತ್ಯವನ್ನು ಶೇ.10ರಷ್ಟು ಕಡಿಮೆ ಮಾಡಲಾಗಿದೆ. ವೈದ್ಯಕೀಯ ಕಾಲೇಜು ಆಸ್ಪತ್ರೆಗಳು ತುರ್ತು ವೈದ್ಯಕೀಯ ವಿಭಾಗ ಹೊಂದುವುದು ಮತ್ತು ಅಲ್ಲಿ ಗಾಯಾಳುಗಳಿಗೆ ಸ್ಪಂದಿಸುವ ತರಬೇತಿ ನೀಡುವುದನ್ನು ಕಡ್ಡಾಯಗೊಳಿಸಲಾಗಿದೆ.